ಕರ್ನಾಟಕ ಸರ್ಕಾರ

ಏಪ್ರಿಲ್ 18, 2017

# ಕುಡಿಯುವ ನೀರು, ಮೇವು ಸರಬರಾಜಿಗೆ ಅನುದಾನದ ಕೊರತೆ ಇಲ್ಲ : ಸಿದ್ದರಾಮಯ್ಯ



ಬೆಂಗಳೂರು, ಏಪ್ರಿಲ್ 18:

ಕುಡಿಯುವ ನೀರು ಮತ್ತು ಮೇವು ಸರಬರಾಜಿಗೆ ಅನುದಾನದ ಕೊರತೆ ಇಲ್ಲ ಎಂದು ಪುನರುಚ್ಛರಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜ್ಯವನ್ನು ಆವರಿಸಿರುವ ಭೀಕರ ಬರದ ಹಿನ್ನೆಲೆಯಲ್ಲಿ ಜನರಿಗೆ ಕುಡಿಯುವ ನೀರು ಪೂರೈಕೆಗೆ ಆದ್ಯತೆ ನೀಡಿ ಹಾಗೂ ಜಾನುವಾರುಗಳಿಗೆ ಮೇವು ಒದಗಿಸುವತ್ತಲೂ ಆದ್ಯ ಗಮನಹರಿಸಿ ಎಂದು ಅಧಿಕಾರಿಗಳಿಗೆ ಇಲ್ಲಿ ಇಂದು ತಾಕೀತು ಮಾಡಿದರು.

ಮುಖ್ಯಮಂತ್ರಿಯವರ ಗೃಹ ಕಚೇರಿ ಕೃಷ್ಣಾದಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳ ಜೊತೆಯಲ್ಲಿ ಅಲ್ಲಿನ ಬರಪರಿಸ್ಥಿತಿಯ ಭೀಕರತೆ ಹಾಗೂ ಅದರ ನಿವಾರಣೆಗಾಗಿ ಕೈಗೊಂಡಿರುವ ಪರಿಹಾರ ಕಾಮಗಾರಿಗಳ ಕುರಿತು ವಿಡಿಯೋ ಸಂವಾದ ನಡೆಸಿ ಅವರು ಮಾತನಾಡುತ್ತಿದ್ದರು.

ರಾಜ್ಯವನ್ನು ಭೀಕರ ಬರ ಸತತವಾಗಿ ಕಾಡುತ್ತಿದೆ. ಇಂತಹ ಪರಿಸ್ಥಿತಿಯಲ್ಲಿ ಕುಡಿಯುವ ನೀರಿನ ಕೊರತೆಯಿಂದ ಯಾವುದೇ ಜನ–ಜಾನುವಾರುಗಳಿಗೆ ತೊಂದರೆ ಆಗಬಾರದು. ಅಧಿಕಾರಿಗಳು ಅತ್ಯಂತ ಕಳಕಳಿ ಮತ್ತು ಕಾಳಜಿಯಿಂದ ಹಾಗೂ ಸಮರೋಪಾದಿಯಲ್ಲಿ ಕಾರ್ಯ ನಿರ್ವಹಿಸಬೇಕು ಎಂದು ಸಿದ್ದರಾಮಯ್ಯ ಅವರು ಸಲಹೆ ಮಾಡಿದರು.

ಗ್ರಾಮಾಂತರ ಪ್ರದೇಶಗಳಲ್ಲಿ ಕುಡಿಯುವ ನೀರು ಸರಬರಾಜು ಮಾಡಲು ಗ್ರಾಮೀಣಾಭಿವೃದ್ಧಿ ಇಲಾಖೆ ಈಗಾಗಲೇ 300.90 ಕೋಟಿ ರೂ. ಬಿಡುಗಡೆ ಮಾಡಿದೆ. ಈ ಪೈಕಿ 162.52 ಕೋಟಿ ರೂ. ವೆಚ್ಚವಾಗಿದೆ. ನಗರ ಪ್ರದೇಶಗಳಲ್ಲಿ ಕುಡಿಯುವ ನೀರು ಸರಬರಾಜಿಗೆ ನಗರಾಭಿವೃದ್ಧಿ ಇಲಾಖೆ 196.73 ಕೋಟಿ ರೂ. ಬಿಡುಗಡೆ ಮಾಡಿದೆ. ಅದರಲ್ಲಿ 140.19 ಕೋಟಿ ರೂ ಈಗಾಗಲೇ ವೆಚ್ಚವಾಗಿದೆ. ಅಂತೆಯೇ, ಕಂದಾಯ ಇಲಾಖೆ ಕೂಡಾ ಇದೇ ಬಾಬ್ತಿಗೆ 346.10 ಕೋಟಿ ರೂ ಬಿಡುಗಡೆ ಮಾಡಿದೆ. ಈ ಮೊತ್ತದಲ್ಲಿ 248.79 ಕೋಟಿ ರೂ. ವೆಚ್ಚವಾಗಿದೆ. ರಾಜ್ಯದಲ್ಲಿ ಕುಡಿಯುವ ನೀರಿಗಾಗಿ ಒಟ್ಟಾರೆ 843.73 ಕೋಟಿ ರೂ ಬಿಡುಗಡೆಯಾಗಿದ್ದು, 551.50 ಕೋಟಿ ರೂ ವೆಚ್ಚವಾಗಿದೆ ಎಂದು ಮುಖ್ಯಮಂತ್ರಿ ತಿಳಿಸಿದರು.

ಟ್ಯಾಂಕರ್‌ಗಳ ಮೂಲಕ ಕುಡಿಯುವ ನೀರು ಸರಬರಾಜು ಯೋಜನೆಯಡಿ 1380 ಹಳ್ಳಿಗಳಲ್ಲಿ 2022 ಟ್ಯಾಂಕರ್‌ಗಳ ಮೂಲಕ ನೀರು ಸರಬರಾಜು ಮಾಡಲಾಗಿದೆ. ಅಲ್ಲದೆ, ಬಾಡಿಗೆ ಆಧಾರದ ಮೇಲೆ 607 ಖಾಸಗಿ ಕೊಳವೆ ಬಾವಿಗಳನ್ನು ಪಡೆಯಲಾಗಿದೆ. ನಗರ ಪ್ರದೇಶಗಳಲ್ಲಿ 616 ವಾರ್ಡ್‌ಗಳಲ್ಲಿ 485 ಟ್ಯಾಂಕರ್‌ಗಳ ಮೂಲಕ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ.

ಜಾನುವಾರುಗಳ ಮೇವಿಗಾಗಿ ರಾಜ್ಯ ಸರ್ಕಾರವು 67.80 ಕೋಟಿ ರೂ ಬಿಡುಗಡೆ ಮಾಡಿದೆ. ರಾಜ್ಯದಲ್ಲಿ ಏಪ್ರಿಲ್ 15 ರವರೆಗಿನ ಮಾಹಿತಿಯಂತೆ 53,71,911 ಟನ್‌ಗಳ ಮೇವು ದಾಸ್ತಾನು ಲಭ್ಯವಿದೆ. ರಾಜ್ಯದ 18 ಜಿಲ್ಲೆಗಳಲ್ಲಿ 384 ಮೇವು ಬ್ಯಾಂಕ್‌ಗಳು ಕಾರ್ಯ ನಿರ್ವಹಿಸುತ್ತಿವೆ. ಒಂಭತ್ತು ಜಿಲ್ಲೆಗಳಲ್ಲಿ 84 ಗೋ ಶಾಲೆಗಳನ್ನು ಆರಂಭಿಸಲಾಗಿದ್ದು, 79,220 ಜಾನುವಾರುಗಳಿಗೆ ಅಲ್ಲಿ ಆಶ್ರಯ ಒದಗಿಸಲಾಗಿದೆ. ಎಲ್ಲಾ 30 ಜಿಲ್ಲೆಗಳಲ್ಲಿ 6,94,748 ಮಿನಿ ಕಿಟ್‌ಗಳ ಹಂಚಿಕೆ ಮಾಡಲಾಗಿದೆ.

ಅಂತೆಯೇ, ರಾಜ್ಯ ವಿಪತ್ತು ಸ್ಪಂದನಾ ನಿಧಿಯಡಿ ರಾಜ್ಯದ ಎಲ್ಲಾ 30 ಜಿಲ್ಲಾಧಿಕಾರಿಗಳ ಪಿ ಡಿ ಖಾತೆಗಳಲ್ಲಿ ಇನ್ನೂ 212.84 ಕೋಟಿ ರೂ ಅನುದಾನ ಲಭ್ಯವಿದೆ ಎಂದು ಸಿದ್ದರಾಮಯ್ಯ ಅವರು ವಿವರಿಸಿದರು.

ಏಪ್ರಿಲ್ 15 ನೇ ದಿನಾಂಕದವರೆಗೆ ಪರಿಹಾರ ತಂತ್ರಾಂಶದಲ್ಲಿ 23,16,902 ಫಲಾನುಭವಿಗಳು ನೋಂದಣಿಯಾಗಿದ್ದಾರೆ. ಈವರೆಗೆ 12,03,040 ಫಲಾನುಭವಿ ರೈತರ ಬ್ಯಾಂಕ್ ಖಾತೆಗೆ 671.20 ಕೋಟಿ ರೂ ಇನ್‌ಪುಟ್ ಸಬ್ಸಿಡಿ ನೇರವಾಗಿ ಜಮಾ ಮಾಡಲಾಗಿದೆ. ಕೇಂದ್ರ ಸರ್ಕಾರವು ಮಾರ್ಚ್ 31 ರಂದು ಬಿಡುಗಡೆ ಮಾಡಿದ 1014.30 ಕೋಟಿ ರೂ ಅನುದಾನವನ್ನೂ ರೈತರ ಬ್ಯಾಂಕ್ ಖಾತೆಗೆ ಅತೀ ಶೀಘ್ರದಲ್ಲೇ ಜಮಾ ಮಾಡಲಾಗುವುದು ಎಂದು ಮುಖ್ಯಮಂತ್ರಿ ಹೇಳಿದರು.

ರಾಜ್ಯದಲ್ಲಿ ಮಹಾತ್ಮಾಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ 2016–17 ನೇ ಸಾಲಿನಲ್ಲಿ 30 ಜಿಲ್ಲೆಗಳ ವ್ಯಾಪ್ತಿಯಲ್ಲಿ 915.47 ಲಕ್ಷ ಮಾನವ ದಿನಗಳನ್ನು ಸೃಜಿಸಿ 2961.47 ಕೋಟಿ ರೂ ವೆಚ್ಚದಲ್ಲಿ ಮಾಡಲಾಗಿದೆ.

ರಾಜ್ಯದಲ್ಲಿ ಕೆರೆ ಸಂಜೀವಿನಿ ಮೊದಲನೇ ಹಂತದ ಯೋಜನೆಯಡಿ 825 ಕೆರೆಗಳನ್ನು ಅನುಮೋದಿಸಲಾಗಿದ್ದು, 474 ಕೆರೆಗಳ ಕಾಮಗಾರಿ ಪೂರ್ಣಗೊಂಡಿದೆ. ಅಲ್ಲದೆ, 351 ಕೆರೆಗಳಲ್ಲಿನ ಕಾಮಗಾರಿಗಳು ಪ್ರಗತಿಯಲ್ಲಿವೆ. ಇದಕ್ಕಾಗಿ 25 ಕೋಟಿ ರೂ ವೆಚ್ಚವಾಗಿದೆ. ಕೆರೆ ಸಂಜೀವಿನಿ ಎರಡನೇ ಹಂತದ ಯೋಜನೆಯಲ್ಲಿ ಬಾಕಿ ಉಳಿದಿದ್ದ 351 ಕೆರೆಗಳ ಜೊತೆಗೆ ಇನ್ನೂ 650 ಕೆರೆಗಳನ್ನು ಆಯ್ಕೆ ಮಾಡಿ 1001 ಕೆರೆಗಳ ಕಾಮಗಾರಿ ಪ್ರಾರಂಭಿಸಲಾಗಿದೆ. ಇದರಲ್ಲಿ 206 ಕಾಮಗಾರಿಗಳು ಪೂರ್ಣಗೊಂಡಿವೆ. ಉಳಿದವು ಪ್ರಗತಿಯಲ್ಲಿದೆ. ಇದಕ್ಕಾಗಿ 2.58 ಕೋಟಿ ರೂ.ಗಳನ್ನು ವೆಚ್ಚವಾಗಿದೆ ಎಂದು ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳು ಮುಖ್ಯಮಂತ್ರಿಯವರಿಗೆ ಮಾಹಿತಿ ನೀಡಿದರು.

ಕಂದಾಯ ಸಚಿವ ಕಾಗೋಡು ತಿಮ್ಮಪ್ಪ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಸಚಿವ ಹೆಚ್. ಕೆ. ಪಾಟೀಲ್, ಪಶು ಸಂಗೋಪನಾ ಸಚಿವ ಎ. ಮಂಜು, ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಸುಭಾಷ್ ಚಂದ್ರ ಕುಂಟಿಯಾ, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳೂ, ರಾಜ್ಯ ಅಭಿವೃದ್ಧಿ ಆಯುಕ್ತರೂ ಹಾಗೂ ಕೃಷಿ ಉತ್ಪನ್ನ ಆಯುಕ್ತರೂ ಆದ ಟಿ. ಎಂ. ವಿಜಯ ಭಾಸ್ಕರ್,

**ವಿವಿಧ ಇಲಾಖೆಗಳ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಈ ವಿಡಿಯೋ ಸಂವಾದ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.**

**************

**ಡಿ ಪಿ ಎಂ : ಟಿ ಸಿ ಎಂ ಬಿ**

**<u>ಪತ್ರಿಕಾ ಪ್ರಕಟಣೆ</u>**

ದಿನಾಂಕ: 18.04.2017 ರಂದು ಬೆಳಿಗ್ಗೆ 10.30 ರಿಂದ ಸಂಜೆ 6.30ರವರೆಗೆ ಮಾನ್ಯ ಮುಖ್ಯ ಮಂತ್ರಿಯವರ ಅಧ್ಯಕ್ಷತೆಯಲ್ಲಿ ಹಾಗೂ ಮಾನ್ಯ ಕಂದಾಯ ಸಚಿವರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು, ಕೃಷಿ ಸಚಿವರು, ಪಶುಸಂಗೋಪನೆ ಸಚಿವರು, ಸರ್ಕಾರದ ಮುಖ್ಯ ಕಾರ್ಯದರ್ಶಿ, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು/ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಸರ್ಕಾರದ ಕಾರ್ಯದರ್ಶಿಗಳ ಉಪಸ್ಥಿತಿಯಲ್ಲಿ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು ಮತ್ತು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳೊಂದಿಗೆ ಬರ ಪರಿಸ್ಥಿತಿ ಬಗ್ಗೆ ವೀಡಿಯೊ ಸಂವಾದ ನಡೆಸಲಾಯಿತು.

ಈ ವೀಡಿಯೊ ಸಂವಾದದಲ್ಲಿ ಈ ಕೆಳಕಂಡಂತೆ ನಿರ್ದೇಶನ / ಸೂಚನೆಗಳನ್ನು ನೀಡಲಾಯಿತು.

- 2016–17ನೇ ಸಾಲಿನಲ್ಲಿ ಗ್ರಾಮೀಣಾಭಿವೃದ್ಧಿ, ಕಂದಾಯ ಮತ್ತು ನಗರಾಭಿವೃದ್ಧಿ ಇಲಾಖೆಗಳಿಂದ ಕುಡಿಯುವ ನೀರು ಪೂರೈಕೆಗಾಗಿ ಒಟ್ಟು 843.73 ಕೋಟಿ ಬಿಡುಗಡೆ ಮಾಡಲಾಗಿದೆ. ಶೇ.90%ರಷ್ಟು ಭೌತಿಕ ಪ್ರಗತಿ ಸಾಧಿಸಲಾಗಿದೆ.

- 2017–18ನೇ ಸಾಲಿನಲ್ಲಿ ಕುಡಿಯುವ ನೀರು ಪೂರೈಕೆಗಾಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ **ರೂ. 93.00 ಕೋಟಿ** ಮತ್ತು ಕಂದಾಯ ಇಲಾಖೆಯ ರಾಜ್ಯ **ವಿಪತ್ತು ನಿರ್ವಹಣೆ ನಿಧಿ**ಯಿಂದ **ರೂ. 59.50 ಕೋಟಿ** ಬಿಡುಗಡೆ ಮಾಡಲಾಗಿದೆ. ಬಿಡುಗಡೆಯಾದ ಜಿಲ್ಲಾವಾರು ವಿವರವನ್ನು ಜಿಲ್ಲಾಡಳಿತಕ್ಕೆ ನೀಡುತ್ತಾ, ಬರ ಪರಿಹಾರ ಕಾಮಗಾರಿಗಳನ್ನು ಸಮರ್ಥವಾಗಿ ನಿಭಾಯಿಸಲು ಸೂಚಿಸಲಾಗಿದೆ.

- 2016–17ನೇ ಸಾಲಿನಲ್ಲಿ ಉದ್ಯೋಗ ಖಾತ್ರಿ ಯೋಜನೆಯಡಿ ಒಟ್ಟು 9.15 ಕೋಟಿ ಮಾನವ ದಿನಗಳ ಸೃಜನೆ ಮಾಡಿದ್ದು, ರೂ.3316.65 ಕೋಟಿ ವೆಚ್ಚ ಮಾಡಲಾಗಿದೆ. 2017–18ನೇ ಸಾಲಿಗೆ 10 ಕೋಟಿ ಮಾನವ ದಿನಗಳ ಸೃಜನೆ ಗುರಿ ನೀಡಿದ್ದು, ಜಿಲ್ಲಾವಾರು ಗುರಿಯನ್ನು ಸಿ.ಇ.ಓ. ಗಳಿಗೆ ತಿಳಿಸಿ ವಾರ್ಷಿಕ

ಗುರಿಯ ಶೇ.40% ರಷ್ಟು ಪ್ರಗತಿಯನ್ನು ಏಪ್ರಿಲ್, ಮೇ ಮತ್ತು ಜೂನ್ ತಿಂಗಳಲ್ಲಿ ಸಾಧಿಸುವಂತೆ ಸೂಚಿಸಲಾಯಿತು.

- ಇನ್‌ಪುಟ್ ಸಬ್ಸಿಡಿ ವಿತರಣೆಗೆ ದೇಶದಲ್ಲಿಯೇ ಮೊದಲ ಬಾರಿಗೆ "ಪರಿಹಾರ" ತಂತ್ರಾಂಶ ಜಾರಿಗೆ ತರಲಾಗಿದ್ದು, ಈ ತಂತ್ರಾಂಶದ ಮೂಲಕ ಈವರೆಗೆ ಒಟ್ಟು 16.50 ಲಕ್ಷ ರೈತರಿಗೆ ರೂ.936.20 ಕೋಟಿ ಇನ್‌ಪುಟ್ ಸಬ್ಸಿಡಿಯನ್ನು ನೇರವಾಗಿ ರೈತರ ಬ್ಯಾಂಕ್ ಖಾತೆಗೆ ವರ್ಗಾಯಿಸಲಾಗಿದೆ.

- ಉಳಿದ ರೈತರ ಬ್ಯಾಂಕ್ ಖಾತೆಗಳ ಆಧಾರ್ ಸೀಡಿಂಗ್‌ಅನ್ನು 7 ದಿನಗಳೊಳಗಾಗಿ ಪೂರ್ಣಗೊಳಿಸಲು ಮತ್ತು ಬಾಕಿ ಇನ್‌ಪುಟ್ ಸಬ್ಸಿಡಿ ಮೊತ್ತವನ್ನು **30.04.2017ರೊಳಗೆ** ವಿತರಿಸಲು ಕ್ರಮ ವಹಿಸುವಂತೆ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಯಿತು.

- ರೈತರ ಬ್ಯಾಂಕ್ ಖಾತೆಗೆ ವರ್ಗಾಯಿಸುತ್ತಿರುವ ಬೆಳೆ ಪರಿಹಾರದ ಹಣವನ್ನು ಯಾವುದೇ ಕಾರಣಕ್ಕೂ ಬ್ಯಾಂಕ್‌ನವರು ಸಾಲದ ಬಾಕಿಗೆ ಹೊಂದಾಣಿಕೆ ಮಾಡಿಕೊಳ್ಳದೆ ರೈತರಿಗೆ ನೀಡಲು ಕ್ರಮ ವಹಿಸುವಂತೆ ರಾಜ್ಯ ಮಟ್ಟದ ಬ್ಯಾಂಕರ್‌ಗಳ ಸಮಿತಿಗೆ ಸೂಚನೆ ನೀಡಲಾಯಿತು.

- ಕುಡಿಯುವ ನೀರು, ಮೇವು ಸೇರಿದಂತೆ ಬರ ಪರಿಸ್ಥಿತಿ ಎದುರಿಸಲು ಕೈಗೊಳ್ಳಬೇಕಾದ ಎಲ್ಲಾ ಕ್ರಮಗಳಿಗೆ ಯಾವುದೇ ಹಣಕಾಸಿನ ಕೊರತೆ ಇರುವುದಿಲ್ಲ ಎಂಬುದನ್ನು ಎಲ್ಲಾ ಜಿಲ್ಲಾಧಿಕಾರಿಗಳು/ಜಿಲ್ಲಾ ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳಿಗೆ ತಿಳಿಸಲಾಗಿದೆ.

- ಎಲ್ಲಾ ಗ್ರಾಮಗಳಲ್ಲಿ ಕಡ್ಡಾಯವಾಗಿ ಕುರಿ/ಮೇಕೆ ಸೇರಿದಂತೆ ಎಲ್ಲಾ ರೀತಿಯ ಜಾನುವಾರುಗಳಿಗೆ, ಸಂಖ್ಯೆಗೆ ಅನುಗುಣವಾಗಿ ನರೇಗಾ ಯೋಜನೆಯಡಿ 2 ವಿಧದ ನೀರಿನ ತೊಟ್ಟಿಗಳನ್ನು ನಿರ್ಮಿಸಿ ನೀರು ಪೂರೈಸಲು ಕ್ರಮ ವಹಿಸುವಂತೆ ಸೂಚಿಸಲಾಯಿತು.

- ಎಲ್ಲಾ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಕಾರ್ಯದರ್ಶಿಗಳು ಕಡ್ಡಾಯವಾಗಿ ಜಿಲ್ಲೆಗಳಲ್ಲಿ ಸ್ಥಾಪಿಸಿರುವ ಗೋಶಾಲೆಗಳು ಮತ್ತು ಮೇವು ಬ್ಯಾಂಕ್‌ಗಳಿಗೆ ಭೇಟಿ ನೀಡಿ ನೆರಳು, ನೀರು, ಸ್ವಚ್ಛತೆ, ವೈದ್ಯಕೀಯ ಸೇವೆ, ಮೇವು ಇತ್ಯಾದಿ ಸೌಲಭ್ಯ ಒದಗಿಸಿರುವ ಬಗ್ಗೆ ಪರಿಶೀಲಿಸುವಂತೆ ಸೂಚನೆ ನೀಡಲಾಗಿದೆ.

- ಉದ್ಯೋಗ ಖಾತ್ರಿ ಯೋಜನೆಯಡಿ 15 ದಿನಗಳೊಳಗಾಗಿ ಕೂಲಿ ಪಾವತಿಸುವುದನ್ನು ಖಾತ್ರಿ ಪಡಿಸಿಕೊಳ್ಳುವಂತೆ ಸೂಚಿಸಲಾಗಿದೆ.

- ಉದ್ಯೋಗ ಖಾತ್ರಿ ಯೋಜನೆಯಡಿ ಕೈಗೊಳ್ಳುವ ಕಾಮಗಾರಿ ಸ್ಥಳಗಳಲ್ಲಿ ಉದ್ಯೋಗಸ್ಥರ ಮಕ್ಕಳಿಗೆ ಆಹಾರ, ನೆರಳು, ನೀರು ಮತ್ತು ಪ್ರಥಮ ಚಿಕಿತ್ಸಾ ವ್ಯವಸ್ಥೆಯನ್ನು ಕಲ್ಪಿಸುವಂತೆ ಸೂಚಿಸಲಾಯಿತು.

- ಮಳೆ ಪ್ರಾರಂಭಗೊಳ್ಳುವ ಪೂರ್ವದಲ್ಲಿ ಅಂದರೆ 2 ತಿಂಗಳೊಳಗೆ ಉದ್ಯೋಗ ಖಾತ್ರಿ ಯೋಜನೆಯಡಿ ಜಿಲ್ಲೆಯಲ್ಲಿ ಎಲ್ಲಾ ಕೊಳವೆಬಾವಿ ಮರುಪೂರಣ ರಚನೆ, ಕೆರೆ ಹೂಳು ತೆಗೆಯುವ, ಕೃಷಿ ಹೊಂಡ, ಚೆಕ್ ಡ್ಯಾಂ ರೀತಿಯ ನೀರು ಸಂರಕ್ಷಣೆ ಕಾಮಗಾರಿಗಳನ್ನು ಪೂರ್ಣಗೊಳಿಸುವಂತೆ ಎಲ್ಲಾ ಜಿಲ್ಲಾಧಿಕಾರಿಗಳು/ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ನಿರ್ದೇಶನ ನೀಡಲಾಯಿತು.

- ನರೇಗಾ ಯೋಜನೆಯಡಿ ಸಾಮಗ್ರಿಗಳ ವೆಚ್ಚ ಪ್ರಮಾಣ ಹೆಚ್ಚಾದಲ್ಲಿ, ಎಸ್‌ಸಿಪಿ/ಟಿಎಸ್‌ಪಿ ಯೋಜನೆಯೊಂದಿಗೆ ಒಗ್ಗೂಡಿಸಿ ಸರಿತೂಗಿಸುವಂತೆ ಸೂಚನೆ ನೀಡಲಾಯಿತು.

- ಕೆರೆ ಸಂಜೀವಿನಿ–2ರಡಿ ತೆಗೆದುಕೊಂಡಿರುವ ಎಲ್ಲಾ ಕೆರೆಗಳ ಕಾಮಗಾರಿಗಳನ್ನು ಮೇ ಮತ್ತು ಜೂನ್–2017ರೊಳಗೆ ಪೂರ್ಣಗೊಳಿಸುವಂತೆ ಹಾಗೂ ಅನುಮೋದಿತ ಮೊತ್ತದಲ್ಲಿ ಬಿಡುಗಡೆಗೆ ಬಾಕಿ ಇರುವ ರೂ.40 ಕೋಟಿಗಳನ್ನು ಗ್ರಾಮೀಣಾಭಿವೃದ್ಧಿ ಇಲಾಖೆಗೆ ಕೂಡಲೇ ಬಿಡುಗಡೆ ಮಾಡಲು ಆದೇಶಿಸಲಾಗಿದೆ.

- 2017–18ನೇ ಸಾಲಿನ ಆಯವ್ಯಯದಲ್ಲಿ ಘೋಷಣೆ ಮಾಡಿರುವ "ಕೆರೆ ಸಂಜೀವಿನಿ" ಯೋಜನೆಯಡಿ ರೂ.25.00 ಕೋಟಿಗಳಿಗೆ ಸೀಮಿತಗೊಂಡು ಹಾಗೂ ಮೇ ಮತ್ತು ಜೂನ್–2017ರೊಳಗೆ ಪೂರ್ಣಗೊಳಿಸಬಹುದಾದ ಕೆರೆ ಕಾಮಗಾರಿಗಳನ್ನು ಮಾತ್ರ ಗ್ರಾಮೀಣಾಭಿವೃದ್ಧಿ ಇಲಾಖೆ ವತಿಯಿಂದ ಅನುಷ್ಠಾನಗೊಳಿಸಲು ಸೂಕ್ತ ಕ್ರಿಯಾ ಯೋಜನೆ ರೂಪಿಸಲು ಸೂಚಿಸಲಾಯಿತು. ಉಳಿದಂತೆ ಈ ಯೋಜನೆಯನ್ನು ಸಣ್ಣ ನೀರಾವರಿ ಇಲಾಖೆಯಿಂದಲೇ ಅನುಷ್ಠಾನಗೊಳಿಸಲಿದ್ದು, ಅದರಂತೆ ಕ್ರಿಯಾ ಯೋಜನೆ ರೂಪಿಸಲು ಸಣ್ಣ ನೀರಾವರಿ ಇಲಾಖೆಗೆ ಸೂಚನೆ ನೀಡಲಾಯಿತು.

- ಎಲ್ಲಾ ಬರ ಪರಿಹಾರ ಕಾಮಗಾರಿಗಳ ಕ್ರಿಯಾ ಯೋಜನೆಗಳಿಗೆ ವಿಳಂಬ ಮಾಡದೇ ಅನುಮೋದನೆ ನೀಡುವಂತೆ ಸೂಚಿಸಲಾಯಿತು.

- ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಮಾಡಿರುವಂತೆ ಎಲ್ಲಾ ಜಿಲ್ಲೆಗಳಲ್ಲಿ ನಿಷ್ಕ್ರಿಯಗೊಂಡಿರುವ ಬೋರ್‌ವೆಲ್‌ಗಳಲ್ಲಿನ ಮೋಟಾರ್ ಪಂಪ್, ಕೇಬಲ್, ಪ್ಯಾನಲ್ ಬೋರ್ಡ್, ಪೈಪು ಸೇರಿದಂತೆ ಎಲ್ಲಾ ಪರಿಕರಗಳನ್ನು ಹೊಸ ಕಾಮಗಾರಿಗಳಲ್ಲಿ ಪುನರ್ ಬಳಕೆ ಮಾಡುವಂತೆ ಸೂಚನೆ ನೀಡಲಾಯಿತು.

- ಮಳೆ ಪ್ರಾರಂಭಗೊಂಡಿದ್ದಲ್ಲಿ ಆಯಾ ಜಿಲ್ಲಾ ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು ಮುಖ್ಯ ಮಂತ್ರಿಯವರ 21 ಅಂಶ ಕಾರ್ಯಕ್ರಮಗಳು ಕೈಗೆತ್ತಿಕೊಂಡು ಸಕಾಲದಲ್ಲಿ ಪೂರ್ಣಗೊಳಿಸುವಂತೆ ಸೂಚನೆ ನೀಡಲಾಯಿತು.

- ಗುಂಡ್ಲುಪೇಟೆ 133 ಹಳ್ಳಿ ಬಹುಗ್ರಾಮ ಕುಡಿಯುವ ನೀರು ಯೋಜನೆಯನ್ನು ಮೇ 2017ರ ಅಂತ್ಯಕ್ಕೆ ಹಾಗೂ ಚಾಮರಾಜನಗರ ಯೋಜನೆಯನ್ನು ಜೂನ್–2017ರ ಅಂತ್ಯಕ್ಕೆ ಪೂರ್ಣಗೊಳಿಸಿ ಚಾಲನೆಗೊಳಿಸಲು ಸೂಚಿಸಲಾಯಿತು.

* * *